ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.
ಸಿ.ಸಿ.902/2023

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಧರಪ್ಪಮಾಳಿ | ಪಿ.ಡಬ್ಲ್ಯೂ.5 |
| ತಂದೆಯ ಹೆಸರು | : | ದೇವಣ್ಣ | ಸಿ.ಡಬ್ಲ್ಯೂ.6 |
| ವಯಸ್ಸು | : | 26 ವರ್ಷ | |
| ವೃತ್ತಿ | : | ಪಿ.ಸಿ.ನಂ.249, ನಗರ ಪೊಲೀಸ್ ಠಾಣೆ | |
| ವಾಸ | : | ಚಿಕ್ಕಮಗಳೂರು | |

ದಿನಾಂಕಃ 02-09-2025 ರಂದು ಪ್ರಮಾಣ ವಚನ ಭೋದಿಸಲಾಯಿತು.

ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-

ನಾನು 2022 ರಿಂದ ಇಲ್ಲಿಯವರೆಗೆ ಚಿಕ್ಕಮಗಳೂರಿನ ನಗರ ಪೊಲೀಸ್ ಠಾಣೆಯಲ್ಲಿ ಪಿ.ಸಿ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ10.04.2023 ರಂದು ಚಿಕ್ಕಮಗಳೂರು ಎಂ.ಜಿ. ಆಸ್ಪತ್ರೆಗೆ ಪಿ ಸೀಲನ್ನು ಹೊಂದಿರುವ 4 ಚೀಲಗಳನ್ನು ರಾಸಾಯನಿಕ ಪರೀಕ್ಷೆಗಾಗಿ ತೆಗೆದುಕೊಂಡು ಹೋಗಿರುತ್ತೇನೆ. ಈಗ ನ್ಯಾಯಾಲಯದ ಮುಂದೆ ಇರುವ ಮು.ಮಾ.1 ನ್ನು ನೋಡಿ ಗುರುತಿಸುತ್ತೇನೆ.

(ಈ ಹಂತದಲ್ಲಿ ಎಪಿಪಿರವರು ಸದರಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಯನ್ನು ನೀಡಲಾಯಿತು)

ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-

ರಾಸಾಯನಿಕ ಪರೀಕ್ಷೆಗೆ ತೆಗೆದುಕೊಂಡು ಹೋಗುವ ಸಮಯದಲ್ಲಿ ಮನವಿ ಪತ್ರದ ಜೊತೆಗೆ ಸೂಚನಾ ಪತ್ರ ಮತ್ತು ಒಂದು ಇನ್ ವಾಯ್ಸ್ ಅನ್ನು ನನಗೆ ನೀಡಿರುತ್ತಾರೆ ಎಂದರೆ ಸರಿ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-</u>

ನನ್ನ ಮೇಲಾಧಿಕಾರಿಗಳ ಆದೇಶದ ಪ್ರಕಾರ ನಾನು 4 ಚೀಲಗಳನ್ನು ರಾಸಾಯನಿಕ ಪರೀಕ್ಷೆಗೆ ತೆಗೆದುಕೊಂಡು ಹೋಗಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಚೀಲಗಳನ್ನು ಪಡೆದುಕೊಂಡ ಬಗ್ಗೆ ಹಿಂಬರಹಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ